| | | |
|---|---|---|
| | | ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು. ಸದರಿ ಆರ್‌ಟಿಸಿ ಮೇಲೆ ಇತರೇ ಬ್ಯಾಂಕುಗಳಲ್ಲಿ ಬೆಳೆ ಸಾಲ ಪಡೆದಿರಬಾರದು.<br>• ರೈತನು ರೂ.20,000/-ಗಳ ವೇತನ/ಪಿಂಚಣಿ ಪಡೆಯುತ್ತಿದ್ದರೆ ಅಥವಾ ಆದಾಯ ತೆರಿಗೆ ಪಾವತಿದಾರರಾಗಿಲ್ಲ ಎಂಬ ಬಗ್ಗೆ ದೃಢೀಕರಣ ನೀಡತಕ್ಕದ್ದು.<br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮರುಪಾವತಿಸಬೇಕು.<br>• **ಕುಟುಂಬಕ್ಕೆ 10.00 ಲಕ್ಷಗಳವರೆಗೆ ಮಧ್ಯಮಾವಧಿ/ ದೀರ್ಘಾವಧಿ ಸಾಲಗಳನ್ನು ಶೇಕಡ 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.**<br>• ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ತಾವು ವಾಸಿಸುವ ವ್ಯಾಪ್ತಿಯ ಸಹಕಾರ ಸಂಘಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು.<br>• ಭೂಮಿ ದಾಖಲೆಗಳು, ಭದ್ರತೆಗೆ ಬೇಕಾದ ದಾಖಲೆಗಳು ಮತ್ತು ಯೋಜನಾ ವರದಿಯೊಂದಿಗೆ ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು.<br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮತ್ತು ಶೇ.3 ರ ಬಡ್ಡಿಯನ್ನು ಪಾವತಿಸಬೇಕು. |
| ಈ) | ರೈತರಿಗಾಗಿ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ: | ಸಹಕಾರ ಸಂಘ/ಬ್ಯಾಂಕುಗಳಲ್ಲಿ ರೈತರಿಗಾಗಿ ವಾಹನ ಸಾಲ ಯೋಜನೆ ಸಾಮಾನ್ಯ ಬಡ್ಡಿ ದರದಲ್ಲಿ ಜಾರಿಯಲ್ಲಿರುತ್ತದೆ. |
| ಉ) | ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ: ವಾಹನ ಸಾಲ ಯೋಜನೆಯಲ್ಲಿ ಸಬ್ಸಿಡಿ ನೀಡಲಾಗುತ್ತಿದೆಯೇ? | ಶೇ.3 ರ ಬಡ್ಡಿ ದರದಲ್ಲಿ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲ ನೀಡುವ ಯೋಜನೆಯಲ್ಲಿ ಕೃಷಿ ಯಾಂತ್ರೀಕರಣ ಉದ್ದೇಶದಡಿ ರೈತರಿಗೆ ಟ್ರಾಕ್ಟರ್ ಮತ್ತು ಪವರ್ ಟಿಲ್ಲರ್ ಖರೀದಿಸಲು ಶೇ.3 ರ ದರದಲ್ಲಿ ಸಾಲ ನೀಡಲಾಗುತ್ತಿದೆ.<br>ದ್ವಿಚಕ್ರ ವಾಹನ, ಜೀಪು, ಪಿಕಪ್ ವ್ಯಾನ್ ಹಾಗೂ ಇನ್ನು ಮುಂತಾದ ಯಾವುದೇ ಕೃಷಿ ಸಾಗಾಣಿಕೆಗೆ ಬಳಸುವ ವಾಹನ ಸಾಲಗಳಿಗೆ ರಿಯಾಯಿತಿ ಬಡ್ಡಿ ದರದ ಸಾಲ ಅನ್ವಯವಾಗುವುದಿಲ್ಲ. ಈ ಸಾಲಗಳನ್ನು ಸಂಘ/ಬ್ಯಾಂಕ್ ನಿಗದಿಪಡಿಸಿದ ಸಾಮಾನ್ಯ ಬಡ್ಡಿ ದರದಲ್ಲಿ ರೈತರು ಸಾಲ ಪಡೆಯಬಹುದಾಗಿದೆ. |

**ಸಂಖ್ಯೆ: ಸಿಒ 365 ಸಿಎಲ್‌ಎಸ್ 2020**

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು